## 60ಕ್ಕೂ ಹೆಚ್ಚು ಶಾಸಕರೊಂದಿಗೆ ಚರ್ಚಿಸಿದ ಸಿಎಂ | ಯತ್ನಾಳ್ ವಿರುದ್ಧ 65 ಶಾಸಕರಿಂದ ಸಹಿ ಸಂಗ್ರಹ

# ಉಪಸಮರಕ್ಕೆ ಶಾಸಕರ ಸಹಕಾರ ಕೋರಿದ ಸಿಎಂ

26/3/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಅಭಿವೃದ್ಧಿ, ಅನುದಾನ ಹಾಗೂ ಸ್ಥಾನಮಾನದ ವಿಚಾರಕ್ಕೆ ಸಂಬಂಧಿಸಿದಂತೆ ಮುನಿಸಿಕೊಂಡಿರುವ ಬಿಜೆಪಿ ಶಾಸಕರನ್ನು ವಿಶ್ವಾಸಕ್ಕೆ ಪಡೆಯುವ ಪ್ರಯತ್ನವನ್ನು ಸಿಎಂ ಯಡಿಯೂರಪ್ಪ ಅವರು ಮಾಡಿದ್ದು, ರಾಜ್ಯದಲ್ಲಿ ಎದುರಾಗಲಿರುವ ಉಪಚುನಾವಣೆಗೆ ಸಹಕಾರ ನೀಡುವಂತೆ ಮನವಿ ಮಾಡಿದ್ದಾರೆ.

ಸುಮಾರು 60ಕ್ಕೂ ಹೆಚ್ಚು ಬಿಜೆಪಿ ಶಾಸಕರ ನಿಯೋಗ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಗುರುವಾರ ಭೇಟಿ ಮಾಡಿತ್ತು. ಈ ವೇಳೆ ಕ್ಷೇತ್ರಕ್ಕೆ ಅನುದಾನ, ಸಚಿವರ ವಿರುದ್ಧ ದೂರು ಸೇರಿದಂತೆ ವಿವಿಧ ವಿಷಯಗಳನ್ನು ಪ್ರಸ್ತಾಪಿಸಿದ ಶಾಸಕರುಗಳಿಗೆ ಸಮಾಧಾನ ಮಾಡಿರುವ ಮುಖ್ಯಮಂತ್ರಿ, ಮುಂದಿನ ದಿನದಲ್ಲಿ ಎಲ್ಲರ ಬೇಡಿಕೆಗಳನ್ನು ಈಡೇರಿಸಲಾಗುವುದು. ಆದರೆ, ಬಿಜೆಪಿಗೆ ಪ್ರತಿಷ್ಠೆಯ ಪ್ರಶ್ನೆಯಾಗಿರುವ ಉಪಚುನಾವಣೆಯಲ್ಲಿ ಪಕ್ಷಕ್ಕೆ ಸಹಕಾರ ನೀಡಬೇಕು ಎಂದು ಹೇಳಿದ್ದಾರೆ. ಇದಕ್ಕೆ ಶಾಸಕರು ಒಪ್ಪಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ರಾಜಕೀಯ ಕಾರ್ಯದರ್ಶಿ ರೇಣುಕಾಚಾರ್ಯ, ಮುಖ್ಯಮಂತ್ರಿಗಳೊಂದಿಗೆ ಎರಡೂವರೆ ಗಂಟೆ ಚರ್ಚೆ ಮಾಡಿದ್ದೇವೆ. ಅನುದಾನ ಹಾಗೂ ಮತ್ತಿತರ ವಿಚಾರದಲ್ಲಿ ಸಿಎಂ ಮನೆ ಬಾಗಿಲು ಯಾವಾಗಲೂ ತೆರೆದಿರುತ್ತದೆ. ಏನೇ ಸಮಸ್ಯೆ ಇದ್ದರೂ ಬಗೆಹರಿಸುವುದಾಗಿ ಸಿಎಂ ಹೇಳಿದ್ದಾರೆ. ಮಸ್ಕಿ, ಬೆಳಗಾವಿ, ಬಸವಕಲ್ಯಾಣದಲ್ಲಿ ನಮ್ಮ ಅಭ್ಯರ್ಥಿಗಳು ಗೆದ್ದು ಬರುವ ನಿಟ್ಟಿನಲ್ಲಿ ಎಲ್ಲಾ ಶಾಸಕರು ಕೆಲಸ ಮಾಡಬೇಕು ಎಂದು ಸೂಚನೆ ನೀಡಿದ್ದಾರೆ. ಈ ನಿಟ್ಟಿನಲ್ಲಿ ಎಲ್ಲ ಶಾಸಕರು ಪ್ರಚಾರದಲ್ಲಿ ತೊಡಗುತ್ತೇವೆ ಎಂದು ಹೇಳಿದರು.

**ಯತ್ನಾಳ್ ವಿರುದ್ಧ ದೂರು:** ರಾಜ್ಯ ಸರಕಾರ ಹಾಗೂ ಮುಖ್ಯಮಂತ್ರಿ ಅವರನ್ನು ನಿರಂತರವಾಗಿ ಟೀಕಿಸುತ್ತಿರುವ ಬಿಜೆಪಿ ಹಿರಿಯ ಶಾಸಕ ಬಸನಗೌಡ ಪಾಟೀಲ್ ಅವರ ವಿರುದ್ಧ 65ಕ್ಕೂ ಹೆಚ್ಚು ಶಾಸಕರ ಸಹಿ ಸಂಗ್ರಹಿಸಲಾಗಿದೆ. ಇನ್ನೂ ಸುಮಾರು 10ಕ್ಕೂ ಹೆಚ್ಚು ಶಾಸಕರು ಸಹಿ ಮಾಡಿದ ಬಳಿಕ ಅದನ್ನು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ಅವರಿಗೆ ದೂರಿನ ಪ್ರತಿ ನೀಡಲು ನಿರ್ಧರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಇದರೊಂದಿಗೆ ಇದೇ ಪ್ರತಿಯನ್ನು ದೆಹಲಿಗೆ ತೆರಳಿ ಬಿಜೆಪಿ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಮತ್ತು ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರಿಗೆ ಸಹಿ ಪತ್ರ ನೀಡಲು ಶಾಸಕರು ಮುಂದಾಗಿದ್ದಾರೆ ಎಂದು ತಿಳಿದುಬಂದಿದೆ.



ಸುಮಾರು 60ಕ್ಕೂ ಹೆಚ್ಚು ಬಿಜೆಪಿ ಶಾಸಕರ ನಿಯೋಗ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಗುರುವಾರ ಭೇಟಿ ಮಾಡಿತ್ತು.

### ಶಾಸಕರ ಕೆಲಸ ಮಾಡಿಕೊಡಿ

ಶಾಸಕರ ಅಹವಾಲುಗಳಿಗೆ ಸ್ಪಂದಿಸಿ, ಶಾಸಕರ ಕೆಲಸ ಕಾರ್ಯಗಳಿಗೆ ಆದ್ಯತೆ ನೀಡಿ, ಅವರ ಜತೆ ಸೌಹಾರ್ದತೆ, ಸಮನ್ವಯವನ್ನು ಕಾಯ್ದುಕೊಳ್ಳಿ ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಅವರು ಸಚಿವರುಗಳಿಗೆ ತಾಕೀತು ಮಾಡಿದ್ದಾರೆ. ಹಲವು ಸಚಿವರುಗಳು ತಮಗೆ ಸ್ಪಂದಿಸುತ್ತಿಲ್ಲ, ಅಭಿವೃದ್ಧಿ ಕಾರ್ಯ, ಅನುದಾನ ಬೇಡಿಕೆ ಸೇರಿದಂತೆ ಯಾವುದೇ ವಿಚಾರಗಳಿಗೂ ಸಚಿವರುಗಳು ಆಸಕ್ತಿ ತೋರದೆ ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ಆಡಳಿತ ಪಕ್ಷದ ಹಲವು ಶಾಸಕರು ದೂರು ನೀಡಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಶಾಸಕರು ಹಾಗೂ ಸಚಿವರುಗಳ ಸಭೆ ನಡೆಸಿ, ಶಾಸಕರು ಹಾಗೂ ಸಚಿವರುಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಿದರು ಎಂದು ತಿಳಿದುಬಂದಿದೆ.

### ಸಚಿವ ಸುಧಾಕರ್ ವಿರುದ್ಧ ಶಾಸಕರು ಗರಂ

ಸಚಿವ ಸುಧಾಕರ್ ಹೇಳಿಕೆಯನ್ನು ಖಂಡಿಸಿರುವ ಶಾಸಕರು, ಇಂತಹ ದುರಹಂಕಾರಿ ಸಚಿವರ ವಿರುದ್ಧ ಕ್ರಮ ಕೈಗೊಳ್ಳಿ ಎಂದು ಆಗ್ರಹಿಸಿದ್ದಾರೆ. ಸಿಡಿ ಕುರಿತಾದ ಸಚಿವರ ಹೇಳಿಕೆ ಈ ಹಂತದಲ್ಲಿ ಅಗತ್ಯವಿರಲಿಲ್ಲ. ಸದನ ನಡೆಯುವ ಸಮಯದಲ್ಲಿ ಈ ರೀತಿ ಮಾತನಾಡಿದ್ದಾರೆ. ಅಷ್ಟೇ ಅಲ್ಲದೇ, ಎಲ್ಲ ಶಾಸಕರ ಬಗ್ಗೆಯೂ ಪ್ರಶ್ನೆ ಮಾಡಿರುವುದು ಎಷ್ಟು ಸರಿ? ಇದು ದುರಹಂಕಾರಿ ಹೇಳಿಕೆ ಆಗೋದಿಲ್ವಾ..? ಸರಕಾರದಲ್ಲಿರುವ ಇಂತಹ ಸಚಿವರ ಬಾಯಿ ಮುಚ್ಚಿಸುವ ಕೆಲಸ ಮಾಡಿ. ಇಲ್ಲದೆ ಹೋದರೆ ಪಕ್ಷಕ್ಕೆ ಇವರಿಂದ ಹಾನಿಯಾಗುತ್ತದೆ ಎಂದ ಶಾಸಕರು, ಯಡಿಯೂರಪ್ಪ ಅವರಿಗೆ ಮನವಿ ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಬಿಜೆಪಿಯ 50ಕ್ಕೂ ಹೆಚ್ಚು ಶಾಸಕರೊಂದಿಗೆ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಿದ್ದೇವೆ. ಮುಂದಿನ ತಿಂಗಳು ಎದುರಾಗಲಿರುವ ಉಪಚುನಾವಣೆ ವಿಚಾರ ಚರ್ಚಿಸಿದ್ದು, ಎಲ್ಲ ಶಾಸಕರು ಚುನಾವಣಾ ಕಾರ್ಯದಲ್ಲಿ ತೊಡಗಿಕೊಳ್ಳಲು ಹೇಳಿದ್ದೇವೆ. ಎಲ್ಲರು ಒಗ್ಗಟ್ಟಾಗಿ ಕೆಲಸ ಮಾಡುವ ತೀರ್ಮಾನ ಮಾಡಿದ್ದೇವೆ.

- ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ